**1 ನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಂಗಾರಪೇಟೆ**

**ಸಿಸಿ ಸಂಖ್ಯೆ: 1893/2022** **ಚಾಸಾಃ 03** **ಪ್ರಾಸಾಃ 01**

**ಸಾಕ್ಷಿಯನ್ನು ದಿಃ 07.02.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಸಂಗಮ್ |
| ತಂದೆ ಹೆಸರುಃ | ಚಂದ್ರಶೇಖರ್ |
| ವಯಸ್ಸುಃ | 34 |
| ವೃತ್ತಿಃ | ಚಾಲಕ |
| ವಾಸ ಸ್ಥಳಃ | ಅಂಬೇಡ್ಕರ್ ನಗರ, ಕೋಲಾರ |

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ 2 ರವರ ಪರಿಚಯ ನನಗೆ ಇರುವುದಿಲ್ಲ. ಸದರಿ ಪ್ರಕರಣದಲ್ಲಿ ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಜರುಗಿಸಿಲ್ಲ ಹಾಗೂ ಏನನ್ನೂ ಜಪ್ತಿ ಮಾಡಿಕೊಂಡಿಲ್ಲ. ನಾನು ಪೋಲೀಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ. ಇಷ್ಟನ್ನು ಹೊರತು ಪಡಿಸಿ ನನಗೆ ಬೇರೆ ಏನೂ ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲಾತಿ ತೋರಿಸಲಾಗಿ ಸದರಿ ದಾಖಲಾತಿಯು ಶೋಧನಾ ಸಮುಚಿತ ಆಧಾರವಾಗಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸುವ ಕಾರಣದಿಂದಾಗಿ ಸದರಿ ದಾಖಲಾತಿಯನ್ನು ನಿ ಪಿ 1 ಎಂದು, ಸಾಕ್ಷಿಯ ಸಹಿ ನಿ ಪಿ 1(ಎ) ಎಂದು ಗುರುತಿಸಲಾಯಿತು. ಸದರಿ ದಾಖಲಾತಿಗೆ ನನ್ನ ಸಹಿಯನ್ನು ಸುಮಾರು 4 ವರ್ಷಗಳ ಹಿಂದೆ ಪೋಲೀಸ್ ಠಾಣೆಯಲ್ಲಿ ಹಾಕಿರುತ್ತೇನೆ. ಸದರಿ ದಾಖಲಾತಿಗೆ ನನ್ನ ಸಹಿಯನ್ನು ಯಾವ ಕಾರಣಕ್ಕಾಗಿ ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿ ಪಿ 1 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲಾತಿ ತೋರಿಸಲಾಗಿ ಸದರಿ ದಾಖಲಾತಿಯು ಪಂಚನಾಮೆ ಆಗಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸುವ ಕಾರಣದಿಂದಾಗಿ ಸದರಿ ದಾಖಲಾತಿಯನ್ನು ನಿ ಪಿ 2 ಎಂದು, ಸಾಕ್ಷಿಯ ಸಹಿ ನಿ ಪಿ 2(ಎ) ಎಂದು ಗುರುತಿಸಲಾಯಿತು. ಸದರಿ ದಾಖಲಾತಿಗೆ ನನ್ನ ಸಹಿಯನ್ನು ಸುಮಾರು 4 ವರ್ಷಗಳ ಹಿಂದೆ ಪೋಲೀಸ್ ಠಾಣೆಯಲ್ಲಿ

ಹಾಕಿರುತ್ತೇನೆ. ಸದರಿ ದಾಖಲಾತಿಗೆ ನನ್ನ ಸಹಿಯನ್ನು ಯಾವ ಕಾರಣಕ್ಕಾಗಿ ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿ ಪಿ 2 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ.

ಸಾಕ್ಷಿಗೆ ಒಂದು ದಾಖಲಾತಿ ತೋರಿಸಲಾಗಿ ಸದರಿ ದಾಖಲಾತಿಯು ಮಾದರಿ ಸೀಲು ಮತ್ತು ಸಹಿ ಆಗಿದ್ದು, ಸಾಕ್ಷಿಯು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸುವ ಕಾರಣದಿಂದಾಗಿ ಸದರಿ ದಾಖಲಾತಿಯನ್ನು ನಿ ಪಿ 3 ಎಂದು, ಸಾಕ್ಷಿಯ ಸಹಿ ನಿ ಪಿ 3(ಎ) ಎಂದು ಗುರುತಿಸಲಾಯಿತು. ಸದರಿ ದಾಖಲಾತಿಗೆ ನನ್ನ ಸಹಿಯನ್ನು ಸುಮಾರು 4 ವರ್ಷಗಳ ಹಿಂದೆ ಪೋಲೀಸ್ ಠಾಣೆಯಲ್ಲಿ ಹಾಕಿರುತ್ತೇನೆ. ಸದರಿ ದಾಖಲಾತಿಗೆ ನನ್ನ ಸಹಿಯನ್ನು ಯಾವ ಕಾರಣಕ್ಕಾಗಿ ಹಾಕಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ನಿ ಪಿ 3 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಮು ಮಾಲನ್ನು ನೋಡಿ ಗುರುತಿಸಿರುವುದಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಎ.ಪಿ.ಪಿ.ರವರು ಕೋರಿರುತ್ತಾರೆ. ಅದರಂತೆ ಅನುಮತಿ ನೀಡಿದೆ.)

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕ 18.7.2021 ರಂದು ಮಧ್ಯಾಹ್ನ 2.00 ಗಂಟೆಯಲ್ಲಿ ಚಾಸಾ 1 ರವರು ತಮ್ಮ ಸಿಬ್ಬಂದಿಯೊಂದಿಗೆ ಕೇತಗಾನಹಳ್ಳಿ ಪಂಚಾಯ್ತಿಯ ಪುತ್ರಸೊಣ್ಣೇನಹಳ್ಳಿ ಗ್ರಾಮದಲ್ಲಿರುವ ಎದ್ದಲಪ್ಪ ರವರಿಗೆ ಸೇರಿದ ನೀಲಗಿರಿ ತೋಪಿನಲ್ಲಿ ನನ್ನ ಹಾಗೂ ಚಾಸಾ 2 ರವರ ಸಮಕ್ಷಮ ಧಾಳಿ ಮಾಡಿ ಸದರಿ ಸ್ಥಳದಲ್ಲಿ ಕಳ್ಳಬಟ್ಟಿ ಸಾರಾಯಿ ತಯಾರಿಕೆಗೆ ಸಿದ್ದಪಡಿಸಲಾದ 25 ಲೀಟರಿನಷ್ಟು ಬೆಲ್ಲದ ಕೊಳೆ, 3 ಲೀಟರ್ ಕಳ್ಳಬಟ್ಟಿ ಸಾರಾಯಿ ಮತ್ತು ಇತರೆ ಪರಿಕರಣಗಳನ್ನು ಮಾರಾಟ ಮಾಡುವ ಉದ್ದೇಶದಿಂದ ಹೊಂದಿದ್ದು, ಅವುಗಳನ್ನು ನಿ ಪಿ 2 ರಂತೆ ಪಂಚನಾಮೆ ಜರುಗಿಸುವ ಮೂಲಕ ಜಪ್ತಿ ಮಾಡಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಈಗ ಓದಿ ಹೇಳಿರುವಂತೆ ನಾನು ದಿನಾಂಕ 18.7.2021 ರಂದು ನನ್ನ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿ ಪಿ 4 ಎಂದು ಗುರುತಿಸಲಾಯಿತು. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ</u>**

ಪಾಟೀ ಸವಾಲು ಇರುವುದಿಲ್ಲ ಎಂದು ನಿವೇದಿಸಿಕೊಂಡಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆ ಮೇರೆಗೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ.

**(ಸುಕೀತಾ ಎಸ್ ಹದ್ಲಿ)**
1 ನೇ ಅಪರ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಬಂಗಾರಪೇಟೆ